# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-06/2022-23

ದಿನಾಂಕ: 22/06/2022

**-:ಸಭೆಯ ನಡವಳಿಗಳು:-**

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 18/06/2022 ಶನಿವಾರದಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ವೆಂಕಟೇಶ್ ಆರ್. ವಾರ್ಡ್ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಶ್ರೀ ವೆಂಕಟೇಶ್ ಆರ್. ರವರು ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

<u>ಸಭೆಯಲ್ಲಿ ಹಾಜರಿದ್ದವರು:-</u>

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ವೆಂಕಟೇಶ್ ಆರ್. ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-75, ಬಿಬಿಎಂಪಿ |
| 3 | ಶ್ರೀ ಎಸ್. ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 4 | ಶ್ರೀ ಕೆ. ವಿ. ಲೋಕೇಶ್, ಹಿರಿಯ ವೆಟರಿನರಿ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 5 | ಶ್ರೀ ಕೆ.ಎಸ್. ಸುನೀಲ್‌ಕುಮಾರ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 6 | ಶ್ರೀ ಸಿದ್ದರಾಮೇಶ್ವರ್ ಆರ್. ಎಸ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 7 | ಶ್ರೀ ನಿರಂಜನ್ ಎನ್. ಸಿ. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ |
| 8 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ಕಾಮಗಾರಿ ವಿಭಾಗ, ವಾರ್ಡ್-75, ಬಿಬಿಎಂಪಿ. |
| 9 | ಶ್ರೀ ಕೆಂಪಯ್ಯ, ಮೇಸ್ತ್ರಿ, ಘ.ತ್ಯಾ.ನಿ. ವಿಭಾಗ, ವಾರ್ಡ್-75, ಬಿಬಿಎಂಪಿ. |
| 10 | ಶ್ರೀ ಮಂಜುನಾಥ್ ಹೆಚ್. ಎಮ್., ಎನ್-3 ಉಪವಿಭಾಗ, ಬೆಸ್ಕಾಂ. |
| 11 | ಶ್ರೀ ಶಿವಕುಮಾರ್, ಲೈನ್‌ಮನ್, ಎನ್-3 ಉಪವಿಭಾಗ, ಬೆಸ್ಕಾಂ. |
| 12 | ಶ್ರೀ ಗಿರೀಶ್ ಬಿ., ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-1, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 13 | ಶ್ರೀ ಬರಡೀ ಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-1, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 14 | ಶ್ರೀಮತಿ ಉಮಾದೇವಿ ಹೆಚ್, ಸಿಸ್ಟರ್, ಆರೋಗ್ಯ ಕೇಂದ್ರ, ವಾರ್ಡ್-75, ಬಿಬಿಎಂಪಿ. |
| 15 | ಶ್ರೀ ಸುನೀಲ್ ಡಿ. ಎಮ್, ವಾರ್ಡ್ ಮಾರ್ಷಲ್, ವಾರ್ಡ್-75, ಬಿಬಿಎಂಪಿ. |
| 16 | ಶ್ರೀ ಅಂಜನ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-2, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 17 | ಶ್ರೀ ಪುಟ್ಟಸ್ವಾಮಿ, ಉದ್ಯಾನವನಗಳ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-75, ಬಿಬಿಎಂಪಿ. |
| 18 | ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 19 | ಶ್ರೀ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 20 | ಶ್ರೀ ಲಕ್ಷ್ಮಣ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 21 | ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 22 | ಶ್ರೀ ಎನ್. ವಿ. ಬಾಹುಬಲಿ, ವಾರ್ಡ್‌ನ ನಾಗರೀಕರು, ವಾರ್ಡ್-75. |

ಪು.ತಿ.ನೋ.

Scanned by CamScanner

| | |
|---|---|
| 23 | ಶ್ರೀ ಅಭಿರಾಮ್ ಬಿ. ವಾರ್ಡ್‌ನ ನಾಗರೀಕರು, ವಾರ್ಡ್-75. |
| 24 | ಶ್ರೀ ಕೆ. ವಿ. ಸುಬ್ರಮಣಿ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 25 | ಶ್ರೀ ದೀಪಕ್ ಕುಲಕರ್ಣಿ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 26 | ಶ್ರೀ ಪ್ರಸನ್ನ ರಾವ್, ವಾರ್ಡ್‌ನ ನಾಗರೀಕರು, ವಾರ್ಡ್-75. |
| 27 | ಶ್ರೀ ಅರುಣಾ ಬಿ. ಕೆ. ವಾರ್ಡ್‌ನ ನಾಗರೀಕರು, ವಾರ್ಡ್-75. |
| 28 | ಶ್ರೀ ಭಾಗ್ಯಲಕ್ಷ್ಮೀ ಆರ್. ವಾರ್ಡ್‌ನ ನಾಗರೀಕರು, ವಾರ್ಡ್-75. |
| 29 | ಶ್ರೀ ನಾರಾಯಣಿ ಕಣ್ಣನ್, ವಾರ್ಡ್‌ನ ನಾಗರೀಕರು, ವಾರ್ಡ್-75. |

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-

1. **ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**
   - ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳು ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
   - ಶ್ರೀಮತಿ ಉಮಾದೇವಿ ಹೆಚ್, ಸಿಸ್ಟರ್, ಆರೋಗ್ಯ ಕೇಂದ್ರ, ವಾರ್ಡ್-75, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಯಾವುದೇ ಕೋವಿಡ್-19 ಸೋಂಕಿತರು ಕಂಡುಬಂದಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.
   - ಶ್ರೀ ಸಿದ್ಧರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಮೃತಪಟ್ಟವರಲ್ಲಿ 10 ವ್ಯಕ್ತಿಗಳ ಕುಟುಂಬಕ್ಕೆ ಇನ್ನೂ ಪರಿಹಾರ ಧನ ನೀಡಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.
   - ಮಾನ್ಯ ನೋಡಲ್ ಅಧಿಕಾರಿಯವರು ರವರು ಮಾತನಾಡುತ್ತಾ, ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಮೃತಪಟ್ಟವರ ವ್ಯಕ್ತಿಗಳ ಕುಟುಂಬಗಳಿಗೆ ಪರಿಹಾರ ಧನವನ್ನು ಬಿಡುಗಡೆ ಮಾಡಲು ಸಂಭಂಧಪಟ್ಟ ಅಧಿಕಾರಿಗಳು ಶೀಘ್ರವಾಗಿ ಸೂಕ್ತ ಕ್ರಮಕೈಗೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.

2. **ಅಭಿಯಂತರರ ವಿಭಾಗದ ಬಗ್ಗೆ:-**
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿನ ತಗ್ಗು ಪ್ರದೇಶಗಳ ರಸ್ತೆಗಳಲ್ಲಿನ ಚರಂಡಿಗಳಲ್ಲಿ ಹೂಳು ತೆಗೆಯಲು ಕೆಲಸಗಳನ್ನು ಶೀಘ್ರವಾಗಿ ಕೈಗೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು.
   - ಸಹಾಯಕ ಅಭಿಯಂತರರು, ರವರು ಮಾತನಾಡುತ್ತಾ, ಮಳೆಯಿಂದಾಗಿ ಅನಾಹುತಗಳಿಗೆ ಒಳಗಾಗುವ ಸೂಕ್ಷ್ಮ ಪ್ರದೇಶಗಳಾದ ಜೆ.ಸಿ.ನಗರದ 19ನೇ ಮುಖ್ಯರಸ್ತೆ, 20ನೇ ಮುಖ್ಯರಸ್ತೆ, 23ನೇ ಮುಖ್ಯರಸ್ತೆ ಹಾಗೂ ಮುಂತಾದ ರಸ್ತೆಗಳಲ್ಲಿ ಹೂಳು ತೆಗೆಯಲಾಗುತ್ತಿದೆ. ಬೃಹತ್ ಮಳೆ ನೀರು ಕಾಲುವೆಗೆ ಸಂಪರ್ಕಗೊಳ್ಳುವ ಜಾಗಗಳಲ್ಲಿ ಹೂಳು ತೆಗೆದು ಕಬ್ಬಿಣದ ಬೆಂಡ್ ಅಳವಡಿಸಲು ಕ್ರಮವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3. **ವಿದ್ಯುತ್ ವಿಭಾಗದ ಬಗ್ಗೆ:-**
   - ಶ್ರೀ ಸಿದ್ಧರಾಜು ಸೋಸಲೆ ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕೆಂಪೇಗೌಡ ಉದ್ಯಾನವನದಲ್ಲಿ ಹಾಗೂ ಕೆಲವು ರಸ್ತೆಗಳಲ್ಲಿ ಬೀದಿ ದೀಪಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
   - ಮಾನ್ಯ ನೋಡೆಲ್ ಅಧಿಕಾರಿಯವರು ಸಭೆಯಲ್ಲಿ ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ರಸ್ತೆಗಳನ್ನು ಪರಿಶೀಲಿಸಿ ಸುಸ್ಥಿತಿಯಲ್ಲಿಲ್ಲದಿರುವ ಬೀದಿ ದೀಪಗಳನ್ನು ಶೀಘ್ರವಾಗಿ ಸರಿಪಡಿಸಲು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.
   - ಶ್ರೀ ಮನೋಜ್, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು ರವರು ಮಾತನಾಡುತ್ತಾ, ಶೀಘ್ರವಾಗಿ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

4. <u>ಪಶುಪಾಲನೆ ವಿಭಾಗದ ಬಗ್ಗೆ:-</u>

- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ಶ್ರೀ ಲಕ್ಷ್ಮೀಪತಿ (ವಾರ್ಡ್‌ನ ನಾಗರೀಕರು) ರವರು ಕರ್ನಾಟಕ ಲೇಔಟ್ 2ನೇ ಹಂತ ಮಸೀದಿಯ ಹತ್ತಿರ ಇರುವ ಸಿ.ಎ. ಜಾಗದಲ್ಲಿ ಸುಮಾರು ಕುದುರೆಗಳನ್ನು ಕಟ್ಟುತ್ತಿದ್ದು, ಇದರಿಂದ ಗಲೀಜು ಆಗಿ ಸೊಳ್ಳೆಗಳು ಹುಟ್ಟಿಕೊಂಡು ಅನಾರೋಗ್ಯದ ಸಮಸ್ಯೆ ಉಂಟಾಗುತ್ತಿರುವುದಾಗಿ ದೂರಿರುತ್ತಾರೆ. ಈ ಬಗ್ಗೆ ಶೀಘ್ರವಾಗಿ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಹಿರಿಯ ವೆಟರಿನರಿ ನಿರೀಕ್ಷಕರಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ಹೇಳಿದರು.

5. <u>ಕಂದಾಯ ವಿಭಾಗದ ಬಗ್ಗೆ:-</u>

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡಿ, ದಿನಾಂಕ: 19.05.2022 ರಂದು ವಾರ್ಡ್-75ರಲ್ಲಿ ಮಳೆ ಹಾನಿಗೊಳಗಾದ ಪ್ರದೇಶಗಳಲ್ಲಿನ ನಿವಾಸಿಗಳ ಮನೆಗಳಿಗೆ ಮತ್ತು ಅಂಗಡಿಗಳಿಗೆ ನೀರು ತುಂಬಿಕೊಂಡು ವಿವಿಧ ವಸ್ತುಗಳು, ದಿನಸಿ ಸಾಮಾಗ್ರಿಗಳು ಮಳೆ ನೀರಿನಲ್ಲಿ ನೆನೆದು ಹಾನಿಯಾಗಿರುವ ನಿವಾಸಿಗಳಿಗೆ ಪಾಲಿಕೆ ವತಿಯಿಂದ ಪರಿಹಾರ ನೀಡಿರುವ ಬಗ್ಗೆ ಮಾಹಿತಿಯನ್ನು ಸಭೆಗೆ ತಿಳಿಸಲು ಕಂದಾಯ ವಿಭಾಗದ ಅಧಿಕಾರಿಗಳಿಗೆ ತಿಳಿಸಿದರು.
- ಶ್ರೀ ಸುನೀಲ್ ಕುಮಾರ್ ಕಂದಾಯ ಪರಿವೀಕ್ಷಕರು, ವಾರ್ಡ್ -75 ರವರು ಮಾತನಾಡುತ್ತಾ, ಈಗಾಗಲೇ ಹಾನಿಗೊಳಗಾದ ನಿವಾಸಿಗಳ ಪಟ್ಟಿಯನ್ನು ತಯಾರಿಸಿ ಅನುಮೋದನೆ ಪಡೆಯಲಾಗಿದ್ದು, ಇದರಲ್ಲಿ ಕೆಲವು ಫಲಾನುಭವಿಗಳಿಗೆ ಮಾತ್ರ ಅನುದಾನ ಬಿಡುಗಡೆಯಾಗಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಇನ್ನುಳಿದ ಫಲಾನುಭವಿಗಳಿಗೆ ಆದಷ್ಟು ಬೇಗ ಅನುದಾನ ಬಿಡುಗಡೆ ಮಾಡಲು ಸಂಭಂಧಪಟ್ಟ ಅಧಿಕಾರಿಗಳು ಶೀಘ್ರವಾಗಿ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.
- ಶ್ರೀ ಸುನೀಲ್ ಕುಮಾರ್, ಕಂದಾಯ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 2022-23ನೇ ಸಾಲಿನಲ್ಲಿ 01-ಏಪ್ರಿಲ್-2022 ರಿಂದ ಇಲ್ಲಿಯವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ. 3.24 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

6. <u>ಅರಣ್ಯ ವಿಭಾಗದ ಬಗ್ಗೆ:-</u>

- ಶ್ರೀ ಆರ್ ಮಂಜುನಾಥ್, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಕಿರ್ಲೋಸ್ಕರ್ ಕಾಲೋನಿ 3ನೇ ಹಂತ 1ನೇ ಮುಖ್ಯರಸ್ತೆಯಲ್ಲಿ ಮರದ ರೆಂಬೆಗಳು ನಿವಾಸಿಗಳ ಕಟ್ಟಡದ ಮೇಲೆ ಬಾಗಿದ್ದು ಹೆಚ್ಚಾಗಿ ಕಸ ಬೀಳುತ್ತಿರುವುದಾಗಿ ಮತ್ತು ಮೇಲ್ಭಾಗದಲ್ಲಿ ಅಳವಡಿಸಲಾಗಿರುವ ಮಂಗಳೂರು ಟೈಲ್ ಗಳು ಮುರಿದು ಬೀಳುತ್ತಿರುತ್ತದೆ ಇದರಿಂದಾಗಿ ತುಂಬಾ ತೊಂದರೆ ಉಂಟಾಗುತ್ತಿದ್ದು, ಸದರಿ ಮರದ ರೆಂಬೆಗಳನ್ನು ಶೀಘ್ರವಾಗಿ ತೆರವುಗೊಳಿಸಿಕೊಡಬೇಕಾಗಿ ಸಭೆಯಲ್ಲಿ ಕೋರಿದರು
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಸದರಿ ದೂರಿನಂತೆ ಮರವನ್ನು ಪರಿಶೀಲಿಸಿ ತೆರವುಗೊಳಿಸಲು ಸೂಕ್ತ ಕ್ರಮವಹಿಸುವಂತೆ ಶ್ರೀ ಮಲ್ಲಪ್ಪ, ಮೇಸ್ತ್ರಿ, ಅರಣ್ಯ ಇಲಾಖೆ, ಬಿಬಿಎಂಪಿ ರವರಿಗೆ ಸಭೆಯಲ್ಲಿ ತಿಳಿಸಿದರು.

7. <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳು ಸರಿಯಾಗಿ ಬರುತ್ತಿಲ್ಲ, ಕಸ ಸರಿಯಾಗಿ ವಿಲೇವಾರಿ ಆಗುತ್ತಿಲ್ಲ ಎಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳನ್ನು ಸರಿಯಾಗಿ ನಿರ್ವಹಣೆ ಮಾಡಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ನಿರಂಜನ್, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

ಮು.ತಿ.ನೋ.

Scanned by CamScanner

8. **ಬೃಹತ್ ನೀರುಕಾಲುವೆ ವಿಭಾಗದ ಬಗ್ಗೆ:-**

- ಶ್ರೀ ಎನ್. ವಿ. ಬಾಹುಬಲಿ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, 5ನೇ ಅಡ್ಡರಸ್ತೆಯಲ್ಲಿ ಮಳೆನೀರು ಹರಿಯುವಿಕೆಯನ್ನು ತಡೆಯಲು ಸೆಕಂಡರಿ ಮೋರಿಯ ಮೇಲ್ಭಾಗದಲ್ಲಿ ಗ್ರೇಟಿಂಗ್ ಅನ್ನು ಅಳವಡಿಸಲಾಗಿರುತ್ತದೆ. ಇದರಿಂದಾಗಿ ಪಕ್ಕದ ಮನೆಗಳಿಗೆ ದುರ್ವಾಸನೆ ಬರುತ್ತಿರುದ್ದು, ತುಂಬಾ ತೊಂದರೆ ಉಂಟಾಗುತ್ತಿರುತ್ತದೆ ಆದುದರಿಂದ ಗ್ರೇಟಿಂಗ್ ಅನ್ನು ತೆರವುಗೊಳಿಸಿ ಮುಂಚಿನಂತೆ ಪ್ರೀಕಾಸ್ಟ್ ಸ್ಲಾಬ್‌ನಿಂದ ಮುಚ್ಚಿಕೊಡಬೇಕಾಗಿ ಸಭೆಯಲ್ಲಿ ಕೋರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಜಾಸ್ತಿ ಮಳೆ ಬಂದಾಗ ರಸ್ತೆಗಳಲ್ಲಿನ ನೀರು ಸರಿಯಾಗಿ ಮಳೆ ನೀರು ಕಾಲುವೆಗೆ ಹರಿಯದೇ ರಸ್ತೆಗಳಲ್ಲಿ ಹರಿದು ಅನಾಹುತಗಳಾಗುವುದನ್ನು ತಡೆಗಟ್ಟಲು ಮಾನ್ಯ ಅಬಕಾರಿ ಸಚಿವರು ಹಾಗೂ ಶಾಸಕರು ಸೂಚಿಸಿದ್ದ ಮೇರೆಗೆ ಗ್ರೇಟಿಂಗ್‌ಗಳನ್ನು ಎಸ್.ಡಬ್ಲ್ಯೂ.ಡಿ. ವತಿಯಿಂದ ಅಳವಡಿಸಲಾಗಿರುತ್ತದೆ. ಇವುಗಳನ್ನು ಮುಚ್ಚಲು ಸಾಧ್ಯವಿರುವುದಿಲ್ಲವೆಂದು ತಿಳಿಸಿ ಮಳೆ ನೀರು ಕಾಲುವೆಗೆ ಒಳಚರಂಡಿ ನೀರು ಸೇರುತ್ತಿರುವುದರಿಂದ ಈ ರೀತಿ ದುರ್ವಾಸನೆ ಬರುತ್ತಿದ್ದು, ಇದನ್ನು ಸರಿಪಡಿಸಿ ಒಳಚರಂಡಿ ನೀರು ಸೇರದಂತೆ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯುಎಸ್‌ಎಸ್‌ಬಿ ಅಧಿಕಾರಿಗಳಿಗೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಆರ್ ಮಂಜುನಾಥ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, 16ನೇ ಡಿ ಮುಖ್ಯರಸ್ತೆಯಲ್ಲಿರುವ ಬೃಹತ್ ನೀರುಕಾಲುವೆಯ ತಡೆಗೋಡೆಯು ಶಿಥಿಲಗೊಂಡಿದ್ದು, ಅದನ್ನು ಸರಿಪಡಿಸಲು ಸಭೆಯಲ್ಲಿ ಕೋರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಮೇಲ್ಕಂಡ ದೂರುಗಳ ಬಗ್ಗೆ ಶೀಘ್ರವಾಗಿ ಪರಿಶೀಲಿಸಿ ಸೂಕ್ತ ಕ್ರಮವಹಿಸಬೇಕಾಗಿ ಸಂಭಂಧಪಟ್ಟ ಅಧಿಕಾರಿಗಳಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ಹೇಳಿದರು.

9. **ತೋಟಗಾರಿಕೆ ವಿಭಾಗದ ಬಗ್ಗೆ:-**

- ಶ್ರೀ ಸಿದ್ದರಾಜು ಹೊಸಲ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕೆಂಪೆಗೌಡ ಹಾಗೂ ಪೈಪ್‌ಲೈನ್ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಉದ್ಯಾನವನಗಳಲ್ಲಿ ಯಾವುದೇ ದೂರುಗಳು ಬಾರದಂತೆ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ಪುಟ್ಟಸ್ವಾಮಿ, ಗುತ್ತಿಗೆದಾರರು, ಉದ್ಯಾನವನಗಳ ನಿರ್ವಹಣೆ, ತೋಟಗಾರಿಕೆ ಇಲಾಖೆ ರವರಿಗೆ ಸಭೆಯಲ್ಲಿ ತಿಳಿಸಿದರು.

10. **ಬೆಸ್ಕಾಂ ವಿಭಾಗದ ಬಗ್ಗೆ:-**

- ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ದಿನಕ್ಕೆ ಅನೇಕ ಬಾರಿ ಕರೆಂಟ್ ಹೋಗುತ್ತಿರುತ್ತದೆ ಇದರಿಂದಾಗಿ ತುಂಬಾ ತೊಂದರೆಗಳು ಉಂಟಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಶ್ರೀ ಮಂಜುನಾಥ್ ಹೆಚ್. ಎಮ್. ಕಿರಿಯ ಅಭಿಯಂತರರು, ಎನ್-3, ಬೆಸ್ಕಾಂ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಟ್ರಾನ್ಸ್‌ಫಾರ್ಮರ್ ಗಳನ್ನು ಹೈರೈಸ್‌ಡ್ ಸಿಂಗಲ್ ಪೋಲ್ ಮಾದರಿಗೆ ಬದಲಾಯಿಸುತ್ತಿರುವುದರಿಂದಾಗಿ ಟಿಸಿಅನ್ನು ಬದಲಾಯಿಸುವ ಸಂಧರ್ಭದಲ್ಲಿ ಕರೆಂಟ್ ಆಫ್ ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

11. **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ಶ್ರೀ ಆರ್ ಮಂಜುನಾಥ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, 5ನೇ ಅಡ್ಡರಸ್ತೆಯಲ್ಲಿ ಲಾವಣ್ಯ ಸ್ಟೋರ್ ಬಳಿಯಿರುವ ಬೃಹತ್ ಮಳೆನೀರು ಕಾಲುವೆಗೆ ಕೆಲವು ಮನೆಗಳಿಂದ ಕೊಳಚೆ ನೀರನ್ನು ಹರಿಯಲು ಬಿಟ್ಟಿರು ತ್ತಾರೆ ಹಾಗಾಗಿ ಅರಬಿಂದೋ ಶಾಲೆಯ ರಸ್ತೆಯಲ್ಲಿ ಕಾಲುವೆಯ ಮೇಲೆ ಅಳವಡಿಸಲಾದ ಗ್ರೇಟಿಂಗ್ಸ್‌ನಿಂದ ದುರ್ವಾಸನೆ ಬರುತ್ತಿರುತ್ತದೆ ಎಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಸದರಿ ದೂರುಗಳನ್ವಯ ಸ್ಥಳಗಳನ್ನು ಪರಿಶೀಲಿಸಿ ಶೀಘ್ರವಾಗಿ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀಮತಿ ಅಂಜನಾ, ಕಾಮಗಾರಿ ಪರಿವೀಕ್ಷಕರು, ಎನ್‌ಡಬ್ಲ್ಯೂ-2 ಉಪವಿಭಾಗ ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರಿಗೆ ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

Scanned by CamScanner

12. ಪೊಲೀಸ್ ವಿಭಾಗದ ಬಗ್ಗೆ:-

- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಸೂಕ್ಷ್ಮ ಪ್ರದೇಶಗಳಲ್ಲಿ ರಾತ್ರೀ ವೇಳೆಯಲ್ಲಿ ಹೆಚ್ಚು ಗಸ್ತು ತಿರುಗುವಂತೆ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ಹೇಳಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳ ಬಗ್ಗೆ ಕ್ರಮವಹಿಸಿರುವ ಕುರಿತು ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

22/6/2022

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 75

ಪ್ರತಿಯನ್ನು :-

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner